**All India Radio: Bangalore**
**Regional Bulletin In Kannada**
**03.11.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.11.2025 / 6.40 p.m.**
*******************

**ಮುಖ್ಯಾಂಶಗಳು**

1. **ಗ್ರೇಟರ್ ಮೈಸೂರಿನಿಂದ ಸಾಂಸ್ಕೃತಿಕ ನಗರಿಯ ಘನತೆ, ವಿಶಾಲತೆಗೆ ಧಕ್ಕೆಯಾಗಬಾರದು: ಮುಖ್ಯಮಂತ್ರಿ ಸೂಚನೆ**
2. **ಬೆಳಗಾವಿಯಲ್ಲಿ ಆನೆಗಳು ಸಾವನ್ನಪ್ಪಿದ ಪ್ರಕರಣ; ತನಿಖೆಗೆ ಸರ್ಕಾರ ಆದೇಶ**
3. **ಮೈಸೂರಿನಲ್ಲಿ 2018-19ರ ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ: ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ**
4. **ಬೆಂಗಳೂರಿನ ಸುರಂಗ ರಸ್ತೆ ಯೋಜನೆ: ಜನರಿಗೆ ಸರ್ಕಾರ ಉತ್ತರ ನೀಡುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹ**
5. **ರೇಣುಕಾಸ್ವಾಮಿ ಕೊಲೆ ಪ್ರಕರಣ: ಆರೋಪ ನಿರಾಕರಿಸಿದ ನಟ ದರ್ಶನ್ ; ಇದೇ 10ರಿಂದ ಸಾಕ್ಷಿಗಳ ವಿಚಾರಣೆ**

***************

ಗ್ರೇಟರ್ ಮೈಸೂರು ಜೊತೆಗೆ ಮೈಸೂರಿನ ಘನತೆ, ಸಂಸ್ಕೃತಿಗೆ, ವಿಶಾಲತೆಗೆ ಧಕ್ಕೆ ಆಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮೈಸೂರು ನಗರಪಾಲಿಕೆ ಕಚೇರಿಯಲ್ಲಿ ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ನಡೆದ ಮೊದಲ 'ಗ್ರೇಟರ್ ಮೈಸೂರು' ಸಭೆಯಲ್ಲಿ ಅಧಿಕಾರಿಗಳಿಗೆ ತಮ್ಮ ಸ್ಪಷ್ಟ ಪರಿಕಲ್ಪನೆಗಳನ್ನು ವಿವರಿಸುವ ಮೂಲಕ ನಿರ್ದೇಶನ ನೀಡಿದ್ದಾರೆ.

ಬೆಂಗಳೂರಿನ ರೀತಿ ಟ್ರಾಫಿಕ್ ಸಮಸ್ಯೆ, ಒಳಚರಂಡಿ, ಫುಟ್‌ಪಾತ್, ಕುಡಿಯುವ ನೀರು, ಯಾವುದರ ಸಮಸ್ಯೆಯೂ ಇರದಂತೆ ಸ್ಪಷ್ಟ ವೈಜ್ಞಾನಿಕ ನೀಲನಕಾಶೆ ಸಿದ್ದಪಡಿಸುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದಾರೆ.

ಮುಂದಿನ 15ರಿಂದ 20 ವರ್ಷಗಳ ಮುಂದಾಲೋಚನೆಯಿಂದ ವೈಜ್ಞಾನಿಕ ಯೋಜನೆ ರೂಪಿಸಬೇಕು, ಟ್ರಾಫಿಕ್ ಸಮಸ್ಯೆ ತಲೆದೋರಬಾರದು, ತ್ಯಾಜ್ಯ ವಿಲೇವಾರಿ, ಕೈಗಾರಿಕಾ ತ್ಯಾಜ್ಯ ವಿಲೇವಾರಿ ಎಲ್ಲವೂ ವೈಜ್ಞಾನಿಕವಾಗಿರಬೇಕು. ಎಂದು ಹೇಳಿದ್ದಾರೆ.

ಮೈಸೂರಿಗೆ ಮತ್ತೊಂದು ಹೊರ ವರ್ತುಲ ರಸ್ತೆ ಅಗತ್ಯವಿದ್ದು, ಇದಕ್ಕೆ ಈಗಲೇ ಯೋಜನೆ ರೂಪಿಸುವಂತೆ ಸಲಹೆ ನೀಡಿದ್ದಾರೆ.

***************

ಬೆಳಗಾವಿ ಜಿಲ್ಲೆಯಲ್ಲಿ ವಿದ್ಯುತ್ ಸ್ಪರ್ಶಿಸಿ ಎರಡು ಆನೆಗಳು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಸರ್ಕಾರ ತನಿಖೆಗೆ ಆದೇಶಿಸಿದೆ. ಅರಣ್ಯ, ಪರಿಸರ ಮತ್ತು ಪರಿಸರ ಸಚಿವ ಈಶ್ವರ್‌ಬಿ.ಖಂಡ್ರೆ ಈ ಸಂಬಂಧ ಆದೇಶ ಹೊರಡಿಸಿದ್ದಾರೆ. ಈತನ್ಮಧ್ಯೆ, ಘಟನೆಗೆ ಸಂಬಂಧಿಸಿದಂತೆ ಭೂಮಾಲೀಕ ಗಣಪತಿ ಸತೇರಿ ಗುರವ್‌ನನ್ನು ಅಧಿಕಾರಿಗಳು ಬಂಧಿಸಿದ್ದಾರೆ.

ಆರೋಪಿ ಗಣಪತಿ ತನ್ನ ಕೃಷಿಭೂಮಿಯ ಸುತ್ತಲೂ ವಿದ್ಯುತ್ ಬೇಲಿ ಅಳವಡಿಸಿಕೊಂಡಿದ್ದಾನೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ತನ್ನ ನಿವಾಸದಿಂದ ನೇರವಾಗಿ ಬೇಲಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ್ದಾನೆ ಎಂದು ಪೊಲೀಸರು ಶಂಕಿಸಿದ್ದಾರೆ.

***************

ಮೈಸೂರಿನಲ್ಲಿ 2018-19ರ ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಿತ್ತಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮಾನಸ ಗಂಗೋತ್ರಿ ಸಭಾಭವನದಲ್ಲಿ ನಡೆಯುತ್ತಿರುವ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಅತ್ಯುತ್ತಮ ಚಲನಚಿತ್ರಗಳು, ಜನಪ್ರಿಯ ಮನರಂಜನಾ ಚಿತ್ರ, ಅತ್ಯುತ್ತಮ ನಟ–ನಟಿ ಸೇರಿದಂತೆ ಚಿತ್ರರಂಗದ ವಿವಿಧ ಪ್ರಕಾರಗಳಲ್ಲಿ ಪ್ರಶಸ್ತಿಗಳಿಗೆ ಭಾಜನರಾಗಿರುವ ಸುಮಾರು 85 ಕಲಾವಿದರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

2018–19ರಲ್ಲಿ ರಾಘವೇಂದ್ರ ರಾಜಕುಮಾರ್ ಅತ್ಯುತ್ತಮ ನಟ, ಮೇಘನರಾಜ್ ಅತ್ಯುತ್ತಮ ನಟಿ ಪ್ರಶಸ್ತಿಗೆ ಭಾಜನರಾಗಿದ್ದಾರೆ.

***************

ರಾಜ್ಯ ಸರ್ಕಾರ ಬೆಂಗಳೂರಿನ ಸುರಂಗ ರಸ್ತೆ ಯೋಜನೆ ಬಗ್ಗೆ ಜನರಿಗೆ ಮಾಹಿತಿ ನೀಡಿಲ್ಲ. ಹೀಗಾಗಿ ಜನರ ಪ್ರಶ್ನೆಗಳಿಗೆ ಮೊದಲು ಉತ್ತರ ನೀಡುವಂತೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂತಹ ಯೋಜನೆ ಕಾರ್ಯಗತಗೊಳಿಸಲು ನೈಪುಣ್ಯತೆ ಇದೆಯೇ ಎಂದು ಸಾಬೀತುಪಡಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಸ್ತೆಗುಂಡಿಗಳನ್ನು ಮುಚ್ಚಿಸಲಿ ಎಂದು ತಿಳಿಸಿದ್ದಾರೆ. ಗುಂಡಿ ಮುಚ್ಚಲು ಆಗದವರು ಸುರಂಗ ಹೇಗೆ ಮಾಡುತ್ತಾರೆ ಎಂದು ಪ್ರಶ್ನಿಸಿದ್ದಾರೆ.

ಲಾಲ್‌ಬಾಗ್, ಕೆಂಪೇಗೌಡ ಗೋಪುರ ಹಾಳಾಗಬಾರದು. ಪರಿಸರ ನಾಶ ಮಾಡಬಾರದು. ನನಗೆ ಉತ್ತರ ಕೊಡುವ ಬದಲು ಜನರಿಗೆ ಸರ್ಕಾರ ಉತ್ತರ ನೀಡಲಿ ಎಂದು ಆಗ್ರಹಿಸಿದ್ದಾರೆ.

***************

ಕಬ್ಬಿನ ಬೆಲೆ ನಿಗದಿಗಾಗಿ ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರ ಪ್ರತಿಭಟನೆ ಮುಂದುವರೆದಿದೆ. ಈ ನಡುವೆ ಕಬ್ಬು ಬೆಳೆಗಾರರ ಪ್ರತಿಭಟನೆಗೆ ಬೆಂಬಲ ನೀಡುವುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಘೋಷಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ರಾಜ್ಯದ ಗಂಭೀರ ಸಮಸ್ಯೆಗಳನ್ನು ಪರಿಹರಿಸುವಲ್ಲಿ ವಿಫಲವಾಗಿದೆ ಎಂದು ದೂರಿದ್ದಾರೆ. ಬೆಳಗಾವಿ, ಬಾಗಲಕೋಟೆ, ವಿಜಯಪುರ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಕಬ್ಬು ಬೆಳೆಗಾರರು ನ್ಯಾಯಯುತ ಬೆಲೆಗಾಗಿ ಕಳೆದ ಹಲವು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದು, ಸಚಿವರು ನಿರ್ಲಕ್ಷ್ಯ ವಹಿಸಿದ್ದಾರೆಂದು ಆರೋಪಿಸಿದ್ದಾರೆ.

***************

ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಧಿಸಿದಂತೆ ಇಂದು ದೋಷಾರೋಪಣೆ ನಿಗದಿ ಪ್ರಕ್ರಿಯೆ ನಡೆದಿದೆ.

ಬೆಂಗಳೂರಿನ 64ನೇ ಸಿಸಿಹೆಚ್ ನ್ಯಾಯಾಲಯಕ್ಕೆ ನಟ ದರ್ಶನ್ ಸೇರಿದಂತೆ ಎಲ್ಲಾ ಆರೋಪಿಗಳು ಹಾಜರಾಗಿದ್ದರು. ಈ ವೇಳೆ ಎಲ್ಲಾ ಆರೋಪಿಗಳು ನ್ಯಾಯಾಧೀಶರ ಮುಂದೆ ತಮ್ಮ ಮೇಲಿನ ಆರೋಪಗಳನ್ನು ನಿರಾಕರಿಸಿದ್ದಾರೆ. ಆರೋಪಗಳನ್ನು ಒಪ್ಪಿಕೊಳ್ಳದ ಹಿನ್ನೆಲೆಯಲ್ಲಿ ಮುಂದಿನ ಹಂತದ ಸಾಕ್ಷಿಗಳ ವಿಚಾರಣೆಗೆ ಇದೇ 10ರಂದು ನ್ಯಾಯಾಲಯ ದಿನಾಂಕ ನಿಗದಿ ಮಾಡಿದೆ.

***************

**ಬೆಂಗಳೂರು ಗ್ರಾಮಾಂತರ** ಜಿಲ್ಲೆಯಲ್ಲಿ ಜಾನುವಾರುಗಳಿಗೆ 8ನೇ ಸುತ್ತಿನ ಕಾಲು–ಬಾಯಿ ರೋಗದ ಲಸಿಕಾ ಅಭಿಯಾನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಇದೇ 3ರಿಂದ ಡಿಸೆಂಬರ್ 2 ರವರೆಗೆ ಕಾಲುಬಾಯಿ ರೋಗ ಲಸಿಕೆ ಅಭಿಯಾನ ಹಮ್ಮಿಕೊಂಡಿದ್ದು, ರೈತರು ತಮ್ಮ ಜಾನುವಾರುಗಳಿಗೆ ಕಾಲು–ಬಾಯಿ ರೋಗ ಬಾರದಂತೆ ಲಸಿಕೆಯನ್ನು ತಪ್ಪದೇ ಹಾಕಿಸಬೇಕು ಎಂದು ತಿಳಿಸಿದ್ದಾರೆ.

**ಕೋಲಾರ** ಜಿಲ್ಲೆಯಲ್ಲಿ 8ನೇ ಸುತ್ತಿನ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮಕ್ಕೆ ಶಾಸಕ ಹಾಗೂ ಕೋಮುಲ್ ಅಧ್ಯಕ್ಷ ಕೆ.ವೈ ನಂಜೇಗೌಡ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು ಜಿಲ್ಲೆಯ ಎಲ್ಲಾ ಪಶುಪಾಲಕರು ತಮ್ಮ ಜಾನುವಾರುಗಳಿಗೆ ತಪ್ಪದೇ 8ನೇ ಸುತ್ತಿನ ಕಾಲು ಬಾಯಿ ಜ್ವರ ರೋಗದ ಲಸಿಕೆ ಹಾಕಿಸಬೇಕು ಬೇಕೆಂದು ರೈತರಲ್ಲಿ ಮನವಿ ಮಾಡಿದರು.

***************

ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಯೋಜನೆಯಡಿ ರಾಜ್ಯಾದ್ಯಂತ 8ನೇ ಸುತ್ತಿನ ಕಾಲುಬಾಯಿ ರೋಗ ನಿರೋಧಕ ಲಸಿಕಾ ಕಾರ್ಯಕ್ರಮದ ಅಂಗವಾಗಿ ಕೊಪ್ಪಳ ಜಿಲ್ಲೆಯಲ್ಲಿ ಇಂದಿನಿಂದ ಕಾಲುಬಾಯಿ ರೋಗ ನಿರೋಧಕ ಲಸಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ 2.45 ಲಕ್ಷ ಜಾನುವಾರುಗಳಿಗೆ ಉಚಿತವಾಗಿ ಲಸಿಕೆ ಹಾಕಲಾಗುತ್ತದೆ. ಲಸಿಕಾ ಕಾರ್ಯಕ್ರಮದ ವೇಳಾಪಟ್ಟಿಯನ್ನು ತಾಲ್ಲೂಕುವಾರು, ಗ್ರಾಮವಾರು ತಯಾರಿಸಲಾಗಿದ್ದು ಜಾನುವಾರುಗಳಿಗೆ ಉಚಿತವಾಗಿ ಲಸಿಕೆ ಹಾಕಲಾಗುವುದು ಎಂದು ಪಶುಪಾಲನಾ ಪತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ಪಿ.ಎಂ.ಮಲ್ಲಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***************

ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150 ನೇ ಜನ್ಮ ದಿನದ ಅಂಗವಾಗಿ ಇದೇ 11 ರಂದು ಉಡುಪಿಯಲ್ಲಿ ಏಕತಾ ನಡಿಗೆ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಕಾರ್ಯಕ್ರಮದ ಮೂಲಸ್ವರೂಪಕ್ಕೆ ಧಕ್ಕೆಯಾಗದಂತೆ ಶಿಸ್ತುಬದ್ಧವಾಗಿ ಆಯೋಜಿಸುವಂತೆ ಅಧಿಕಾರಿಗಳಿಗೆ ಉಡುಪಿ–ಚಿಕ್ಕಮಗಳೂರು ಲೋಕಸಭಾ ಸಂಸದ ಕೋಟ ಶ್ರೀನಿವಾಸ ಪೂಜಾರಿ ಸೂಚನೆ ನೀಡಿದ್ದಾರೆ.

ಏಕತಾ ನಡಿಗೆ ಬೋರ್ಡ್ ಹೈಸ್ಕೂಲ್ ನಿಂದ ಅಜ್ಜರಕಾಡು ಭುಜಂಗ ಪಾರ್ಕಿನ ಹುತಾತ್ಮರ ಯುದ್ಧ ಸ್ಮಾರಕದವರೆಗ ನಡೆಯಲಿದೆ. ಏಕತಾ ನಡಿಗೆಯಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರು, ಎನ್.ಎಸ್.ಎಸ್., ಎನ್.ಸಿ.ಸಿ ಸ್ವಯಂ ಸೇವಕರುಗಳು, ಜನಪ್ರತಿನಿಧಿಗಳು, ಅಧಿಕಾರಿಗಳು, ಸಾರ್ವಜನಿಕರು, ಸಂಘ–ಸಂಸ್ಥೆಗಳು, ಯುವಕ–ಯುವತಿ ಪಾಲ್ಗೊಳ್ಳುವಂತೆ ಮನವಿ ಮಾಡಿದ್ದಾರೆ.

***************

**ಬಳ್ಳಾರಿ** ಜಿಲ್ಲೆಯಲ್ಲಿ ಇಂದಿನಿಂದ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ 14 ದಿನಗಳ ಕಾಲ ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನದ ಸಮೀಕ್ಷಾ ಕಾರ್ಯಕ್ಕೆ ಚಾಲನೆ ದೊರೆತಿದೆ.

ಪಾಲಿಕೆಯ ವಿರೋಧ ಪಕ್ಷದ ನಾಯಕ, ಮಾಜಿ ಮೇಯರ್ ಸಿ.ಇಬ್ರಾಹಿಂ ಬಾಬು ಮಿಲ್ಲರ್ ಪೇಟೆಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತವಾಗಿ ನೀಡುವ ಔಷಧಿ ಮಾತ್ರೆಗಳನ್ನು ತೆಗೆದುಕೊಂಡು ರೋಗಿಗಳು ಗುಣಮುಖರಾಗಬೇಕು ಎಂದು ತಿಳಿಸಿದರು.

***************

ಅಮೃತ ಭಾರತ ನಿಲ್ದಾಣ ಯೋಜನೆಯಡಿ **ಯಾದಗಿರಿ** ರೈಲು ನಿಲ್ದಾಣ ಆಧುನಿಕರಣದ ಕಾಮಗಾರಿಯನ್ನು ಮೂರು ಹಂತಗಳಲ್ಲಿ ಕೈಗೊಳ್ಳಲಾಗುತ್ತಿದೆ. ಪ್ರಗತಿಯಲ್ಲಿರುವ ಮೊದಲ ಹಂತದ ಕಾಮಗಾರಿ ಮುಗಿಸಲು ಜೂನ್ ತಿಂಗಳ ಗಡುವು ನೀಡಲಾಗಿದೆ. ಪ್ರಯಾಣಿಕರಿಗೆ ತೊಂದರೆಯಾಗದಂತೆ ಕಾಮಗಾರಿ ನಡೆಸಲಾಗುತ್ತದೆ ಎಂದು ಗುಂತಕಲ್ ರೈಲ್ವೆ ವಿಭಾಗದ ಎಂಜಿನಿಯರ್ ಜಗದೀಶ್ ತಿಳಿಸಿದ್ದಾರೆ.

ಯಾದಗಿರಿ ನಗರದ ರೈಲು ನಿಲ್ದಾಣದಲ್ಲಿ ಆಯೋಜಿಸಿದ್ದ ಅಮೃತ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೊದಲ ಹಂತದಲ್ಲಿ 17 ಕೋಟಿ 29 ಲಕ್ಷ ರೂಪಾಯಿ ಅನುದಾನ ಬಿಡುಗಡೆಯಾಗಿದೆ ಎಂದು ಹೇಳಿದ್ದಾರೆ.

2ನೇ ಹಂತದ ಕಾಮಗಾರಿಗಳಿಗೆ 35 ಕೋಟಿ ರೂಪಾಯಿ ಅನುದಾನ ಮಂಜೂರಾಗಿದ್ದು, ಮೂರು ಪ್ಲಾಟ್ ಫಾರ್ಮ್ ಗಳನ್ನು ಉನ್ನತೀಕರಿಸಲಾಗುವುದು ಎಂದು ತಿಳಿಸಿದ್ದಾರೆ.

***************